## ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 194/ 2020**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ಮಹ್ಮದ್ ಖಾಸಿಮ್ ಸಾಬ್ | ಫ್ರಾಸಾಃ **02** |
| ತಂದೆ ಹೆಸರುಃ | ಅಬ್ದುಲ್ ಸಾಬ್ | ಚಾಸಾಃ **02** |
| ವಯಸ್ಸುಃ | **45** ವರ್ಷ | ದಿಃ **12-11-2025** |
| ಉದ್ಯೋಗಃ | ವಾಹನ ಚಾಲಕ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಹೋತಪೇಟ, ಶಹಾಪೂರ. | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನನಗೆ ಚಾಸಾಃ 1 ರವರ ಪರಿಚಯ ಇಲ್ಲ. ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ಇಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿ ಪಂಚನಾಮೆಯಲ್ಲಿನ ತಮ್ಮ ಸಹಿಯನ್ನು ಈಗ ನೋಡಿ ಗುರುತಿಸಿದ್ದು, ಪಂಚನಾಮೆಯನ್ನು ನಿಪಿ-1 ಹಾಗೂ ಸಾಕ್ಷಿಯ ಸಹಿ ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರ ಪಂಚನಾಮೆಯಲ್ಲಿನ ಅಂಶಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ವಸ್ತು ಜಪ್ತಿ ಮಾಡಿಕೊಂಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿನಾಂಕ 02.04.2019 ರಂದು ಪೋಲಿಸರು ನನ್ನನ್ನು ಮತ್ತು ಚಾಸಾಃ 1 ರವರನ್ನು ಪಂಚರನ್ನಾಗಿ ಕರೆದುಕೊಂಡು ಆರೋಪಿಯ ಮನೆಯ ಮುಂದೆ ದಾಳಿ ಮಾಡಿ ಕಳ್ಳಭಟ್ಟಿ ಸಾರಾಯಿ ಹಾಗೂ ಬೆಲ್ಲದ ಕೊಳೆಯನ್ನು ಜಪ್ತಿ ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ಪೋಲಿಸರು ಸಾಃ 5.00 ರಿಂದ 5.45 ಗಂಟೆ ವರಗೆ ನನ್ನ ಸಮಕ್ಷಮ ಗುನ್ನೆಜಾಗದಲ್ಲಿ ನಿಪಿ-1 ರಂತೆ ಪಂಚಾನಮೆ ಮಾಡಿದ್ದರು ಎಂದರೆ ಸರಿಯಲ್ಲ. ಈ ಮೇಲಿನ ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರಃ ವಕೀಲರವರಿಂದಃ

ಯಾವುದೇ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.